# ಪತ್ರಿಕಾ ಪ್ರಕಟಣೆ

ವಿಷಯ: ಆಗಸ್ಟ 2018, ದಿನಾಂಕ 25 ಮತ್ತು 26 ರಂದು ನಡೆಸಲು ಉದ್ದೇಶಿಸಿದ್ದ ಕೆ ಎಸ್ ಆರ್ ಟಿ ಸಿ ಮೇಲ್ವಿಚಾರಕೇತರ ಹಾಗೂ ತಾಂತ್ರಿಕ ಸಿಬ್ಬಂದಿಗಳ ನೇಮಕಾತಿ ಪರೀಕ್ಷೆಯನ್ನು ಮುಂದೂಡಿರುವ ಬಗ್ಗೆ.

ಭಾರಿ ಮಳೆ ಮತ್ತು ಭೂಕುಸಿತದಿಂದಾಗಿ ಕರಾವಳಿ, ಮಲೆನಾಡು, ಕೊಡಗು ಮತ್ತು ಇನ್ನಿತರೆ ಸ್ಥಳಗಳು ಪ್ರವಾಹದಿಂದ ಪ್ರಕೃತಿ ವಿಕೋಪಕ್ಕೆ ತುತ್ತಾಗಿವೆ.

ಈ ಹಿನ್ನಲೆಯಲ್ಲಿ, ಕೆಎಸ್ಆರ್ ಟಿ ಸಿ ದಿನಾಂಕ 25 ಮತ್ತು 26 ಆಗಸ್ಟ 2018 ರಂದು ನಡೆಸಲು ಉದ್ದೇಶಿಸಿದ್ದ ಮೇಲ್ವಿಚಾರಕೇತರ ಹಾಗೂ ತಾಂತ್ರಿಕ ಸಿಬ್ಬಂದಿಗಳ ನೇಮಕಾತಿಯ ಲಿಖಿತ ಪರೀಕ್ಷೆಯನ್ನು ಮುಂದೂಡುವಂತೆ ಅಭ್ಯರ್ಥಿಗಳು ಮನವಿ ಸಲ್ಲಿಸಿರುತ್ತಾರೆ.

ಸದರಿ ಪರಿಸ್ಥಿತಿಯನ್ನು ಅವಲೋಕಿಸಿ ಮಾನ್ಯ ಸಾರಿಗೆ ಸಚಿವರು ಉದ್ದೇಶಿತ ಲಿಖಿತ ಪರೀಕ್ಷಾ ದಿನಾಂಕವನ್ನು ಮುಂದೂಡಲು ಸೂಚಿಸಿರುತ್ತಾರೆ. ಈ ಸಂಬಂಧ, ದಿನಾಂಕ 25 ಮತ್ತು 26 ರಂದು ನಡೆಯಬೇಕಾಗಿದ್ದ ನೇಮಕಾತಿ ಪರೀಕ್ಷೆಗಳನ್ನು ಮುಂದೂಡಲಾಗಿದೆ.

ಮುಂದಿನ ಪರೀಕ್ಷಾ ದಿನಾಂಕವನ್ನು ಕೆ ಎಸ್ ಆರ್ ಟಿ ಸಿ ವೆಬ್ ಸೈಟ್ www.ksrtcjobs.com ಮತ್ತು ಪತ್ರಿಕಾ ಪ್ರಕಟಣೆಯ ಮೂಲಕ ತಿಳಿಸಲಾಗುವುದು.

ಸಹಿ/-

ವ್ಯವಸ್ಥಾಪಕ ನಿರ್ದೇಶಕರು